ಇ) ತಕ್ಷಣ ಈ ಕೆಲಸ ಪ್ರಾರಂಭ ಮಾಡಲಾಗುವುದೆ;

ಈ) ಎಷ್ಟು ದಿನದಲ್ಲಿ ಮಾಡಲಾಗುವುದು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು)

ಅ) ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ಹಿಂದಿನ ಆರ್ಥಿಕ ವರ್ಷದಲ್ಲಿ 3054 ಲೆಕ್ಕ ಶೀರ್ಷಿಕೆಯಡಿ ಅನುದಾನದ ಕೊರತೆ ಇದ್ದುದರಿಂದ ಹಾಗೂ ಪ್ರಸ್ತಾವಿಕ ಕಾಮಗಾರಿಗೆ ಪ್ರತ್ಯೇಕವಾಗಿ ಅನುದಾನ ಒದಗಿಸಲಾಗದಿದ್ದುದರಿಂದ ಅಭಿವೃದ್ಧಿ ಕೆಲಸವನ್ನು ಕೈಗೊಂಡಿರುವುದಿಲ್ಲ.

ಇ) ಈ ಬಗ್ಗೆ ಪರಿಶೀಲಿಸಲಾಗುವುದು.

ಈ) ಈ ಕಾಮಗಾರಿಯನ್ನು ಕೈಗೆತ್ತಿಕೊಳ್ಳುವ ಬಗ್ಗೆ ಪರಿಶೀಲಿಸಿ ಮತ್ತು ಅನುದಾನದ ಲಭ್ಯತೆ ಮೇರೆಗೆ ನಿಯಮದಂತೆ ಕೈಗೊಂಡು ಪೂರ್ಣಗೊಳಿಸಲಾಗುವುದು.

ತುರುವೇಕೆರೆ ತಾಲ್ಲೂಕು ದೊಡ್ಡಮಾರ್ಗೋನಹಳ್ಳಿ ಬಳಿ ಶಿಂಷಾ ನದಿಗೆ ಸೇತುವೆ ನಿರ್ಮಾಣ

3322 (3735) : ಶ್ರೀ ಲಕ್ಷ್ಮೀನಾರಾಯಣ ಎಂ.ಡಿ (ಅಣ್ಣಯ್ಯ) (ತುರುವೇಕೆರೆ) ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ತುರುವೇಕೆರೆ ತಾಲ್ಲೂಕು ಮಾಯಸಂದ್ರ ಹೋಬಳಿ ದೊಡ್ಡಮಾರ್ಗೋನಹಳ್ಳಿ ಗ್ರಾಮದ ಬಳಿ ಶಿಂಷಾ ನದಿಗೆ ಸೇತುವೆ ನಿರ್ಮಾಣ ಮಾಡಲು ಸರ್ಕಾರ ಯೋಚಿಸಿದೆಯೇ;

ಆ) ಈಗಾಗಲೇ ಕಳೆದ ಮೂರು ವರ್ಷದಿಂದ ಒಪ್ಪಿಕೊಂಡಿದ್ದರೂ ಸಹ ಸರ್ಕಾರ ಇದುವರೆಗೂ ಮಾಡಿಸದಿರಲು ಕಾರಣವೇನು;

ಇ) 2003–04 ನೇ ಸಾಲಿನಲ್ಲಾದರೂ ಕೈಗೆತ್ತಿಕೊಳ್ಳಲಾಗುವುದೇ?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು)

ಅ) ಈ ಸೇತುವೆ ಗ್ರಾಮೀಣ ರಸ್ತೆಯ ಮೇಲೆ ಬರುತ್ತದೆ. ಲೋಕೋಪಯೋಗಿ ಇಲಾಖೆಯ ವತಿಯಿಂದ ಪ್ರಸ್ತುತ ಯಾವುದೇ ಯೋಜನೆ ಇರುವುದಿಲ್ಲ.

ಆ) ಈ ಕಾಮಗಾರಿ ಯಾವುದೇ ಯೋಜನೆಯಡಿ ಮಂಜೂರಾಗಿರುವುದಿಲ್ಲ.

ಇ) ಪರಿಶೀಲಿಸಲಾಗುವುದು.

ತುರುವೇಕೆರೆ ತಾಲ್ಲೂಕು ದಂಡಿನಶಿವರ ಹೋಬಳಿ ಬಿ.ಸಿ. ಕಾವಲ್ ಜಮೀನು ಅಳತೆ

3323 (3736) : ಶ್ರೀ ಲಕ್ಷ್ಮೀನಾರಾಯಣ ಎಂ.ಡಿ. (ತುರುವೇಕೆರೆ) ಮಾನ್ಯ ಕಂದಾಯ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ತುರುವೇಕೆರೆ ತಾಲ್ಲೂಕು ದಂಡಿನಶಿವರ ಹೋಬಳಿ ಬಿ.ಸಿ. ಕಾವಲ್‌ನ ಜಮೀನು ಅಳೆಯಲು ಸರ್ಕಾರ ನಿರ್ಧರಿಸಿದೆಯೇ?

ಆ) ಸರಿಯಾದ ಅಳತೆ ಸಿಗದೆ ರೈತರು ತುಂಬಾ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ?

ಇ) ಬಂದಿದ್ದಲ್ಲಿ ತಕ್ಷಣ ನುರಿತ ಸರ್ವೆಯರ್‌ಗಳಿಂದ ಕಾರ್ಯಾಚರಣೆ ಮಾಡಿಸಲಾಗುವುದೇ?

ಈ) ಹಾಗಿದ್ದಲ್ಲಿ ಯಾವಾಗ ಮಂಡಿಸಲಾಗುವುದು?